**ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಎಲ್.ಎಫ್. ಔಷಧಾಲಯ ತೆರೆಯುವುದು.**

3712 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ:

ಅ) *ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿ ಆಂಜನೇಯಪ್ಪ ಗಾರ್ಡನ್‌ನಲ್ಲಿ ಎಲ್.ಎಫ್. ಔಷಧಾಲಯವಿದೆಯೇ?*

ಆ) *ಇಲ್ಲದಿದ್ದಲ್ಲಿ 1991-92ನೇ ಸಾಲಿನಲ್ಲಿ ಇಲ್ಲಿ ಎಲ್.ಎಫ್. ಡಿಸ್ಪೆನ್ಸರಿ ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಪ್ರಾಥಮಿಕ ಆರೋಗ್ಯ ಘಟಕ : ಎಲ್.ಎಫ್ ಡಿಸ್ಪೆನ್ಸರಿಗಳನ್ನು ಮಂಜೂರು ಮಾಡುವ ಯೋಜನೆಯನ್ನು ನಿಲ್ಲಿಸಲಾಗಿದೆ.

**ಮಾಗಡಿ ರಸ್ತೆಯಲ್ಲಿ ಸಾರ್ವಜನಿಕ ಆಸ್ಪತ್ರೆಯನ್ನು ತೆರೆಯುವ ಪ್ರಸ್ತಾವನೆ.**

3710 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ:

ಅ) *ಬೆಂಗಳೂರಿನ ಮಾಗಡಿ ರಸ್ತೆಯಲ್ಲಿ ಸಾರ್ವಜನಿಕ ಆಸ್ಪತ್ರೆಯನ್ನು ತೆರೆಯುವ ಪ್ರಸ್ತಾವನೆಯೇನಾದರೂ ಇದೆಯೇ?*

ಆ) *ಇಲ್ಲದಿದ್ದರೆ ಕೆಂಪಾಪುರ ಅಗ್ರಹಾರ, ಬಿನ್ನಿಪೇಟೆ ಹಾಗೂ ಮಾಗಡಿ ರಸ್ತೆ ಆಸುಪಾಸಿನಲ್ಲಿ ಜೀವಿಸುತ್ತಿರುವ ಬಡ ಜನರಿಗೆ ವೈದ್ಯೋಪಚಾರ ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಈಗಿರುವ ಕುಷ್ಠರೋಗದ ಆಸ್ಪತ್ರೆಯನ್ನು ಬೇರೆಡೆಗೆ ವರ್ಗಾಯಿಸಿ ಆ ಜಾಗದಲ್ಲಿ ಸಾರ್ವಜನಿಕ ಆಸ್ಪತ್ರೆಯನ್ನು ತೆರೆಯಲು ಸರ್ಕಾರ ಯಾವುದಾದರೂ ಕ್ರಮ ತೆಗೆದು ಕೊಳ್ಳುವುದೇ?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಹೌದು

ಇ) ಈಗ ಹಾಲಿ ಇರುವ ಕುಷ್ಠರೋಗ ಆಸ್ಪತ್ರೆಯಲ್ಲಿ ಒಬ್ಬ ವೈದ್ಯರು ಮಾಗಡಿ ರಸ್ತೆಯ ಆಸುಪಾಸಿನಲ್ಲಿ ವಾಸಿಸುತ್ತಿರುವ ಬಡರೋಗಿಗಳ ವೈದ್ಯಕೀಯ ತಪಾಸಣೆ ಮಾಡುತ್ತಿದ್ದಾರೆ, ಒಂದು ಲಕ್ಷ ರೂ ಹಣವನ್ನು ಬಡರೋಗಿಗಳಿಗೆ ಔಷದವನ್ನು ಖರೀದಿಸುವ ಸಲುವಾಗಿ ಒದಗಿಸಿದೆ. ಪ್ರತಿ ನಿತ್ಯವೂ 50 ರಿಂದ 75 ಬಡ ರೋಗಿಗಳು ಸಾಮಾನ್ಯವಾಗಿ ಖಾಯಿಲೆಗಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಸ್ಟೀಲ್ ಪೀಠೋಪಕರಣಗಳ ದರ ಒಪ್ಪಂದದ ಬಗ್ಗೆ**

3711 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ: